ಪವರ್‌ಲಿಫ್ಟ್‌ನಲ್ಲಿ ಸುಜೀಲ್ ಅಹ್ಮದ್‌ಗೆ ಚಿನ್ನದ ಪದಕ

ದಾವಣಗೆರೆ, ಮಾ. 9 - ಕರ್ನಾಟಕ ಪವರ್ ಲಿಫ್ಟ್ ಅಸೋಸಿಯೇಷನ್ ವತಿಯಿಂದ ಇತ್ತೀಚೆಗೆ ಉತ್ತರ ಕನ್ನಡ ಜಿಲ್ಲೆಯ ಕುಮಟಾದ [illegible] ನಡೆಸಲಾಗಿದ್ದ ರಾಜ್ಯ ಮಟ್ಟದ ಪವರ್‌ಲಿಫ್ಟ್ ಸ್ಪರ್ಧೆಯ ಸಬ್ ಜ್ಯೂನಿಯರ್ ವಿಭಾಗದಲ್ಲಿ ಜಿಲ್ಲೆಯ ಅಂತರಾಷ್ಟ್ರೀಯ ಖ್ಯಾತಿಯ ಕ್ರೀಡಾಪಟು ಹಾಗೂ ಏಕಲವ್ಯ ಪ್ರಶಸ್ತಿ ಪುರಸ್ಕೃತ ಎಸ್. ದಾದಾಪೀರ್, ಶೈಲಜಾ ದಾದಾಪೀರ್ ದಂಪತಿ ಪುತ್ರ ಸುಜೀಲ್ ಅಹ್ಮದ್‌ರವರು ಪ್ರಥಮ ಸ್ಥಾನ ಗಳಿಸಿ ಚಿನ್ನದ ಪದಕ ಪಡೆದಿದ್ದಾರೆ.

ನಗರದ ಅಥಣಿ ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ಪ್ರಥಮ ಪಿಯುಸಿ ವ್ಯಾಸಂಗ ಮಾಡುತ್ತಿರುವ ಸುಜೀಲ್ ಅಹ್ಮದ್‌ಗೆ ತರಬೇತುದಾರರಾದ ಎಸ್. ಹನುಮಂತಪ್ಪ, ಕಾಲೇಜಿನ ಮುಖ್ಯಸ್ಥ ಅಥಣಿ ವೀರಣ್ಣ ಅಭಿನಂದನೆ ಸಲ್ಲಿಸಿದ್ದಾರೆ.

ಕುಕ್ಕುವಾಡ ಸಕ್ಕರೆ ಕಾರ್ಖಾನೆ ಸಮಸ್ಯೆಗೆ ಮುಕ್ತಿ ದೊರಕಿಸುವಂತೆ ರೈತರ ಆಗ್ರಹ

ದಾವಣಗೆರೆ, ಮಾ.9- ಕುಕ್ಕುವಾಡದ ಸಕ್ಕರೆ ಕಾರ್ಖಾನೆಯಿಂದ ಉಂಟಾಗಿರುವ ಸಮಸ್ಯೆ ಪರಿಹರಿಸುವ ಕುರಿತು ರೈತರಿಗೆ ಜಿಲ್ಲಾಡಳಿತ ನೀಡಿದ್ದ ಭರವಸೆ ಈಡೇರಿಸಬೇಕು. ಇಲ್ಲವಾದರೆ ಬೃಹತ್ ಹೋರಾಟದ ರೂಪುರೇಷೆ ಕೈಗೊಳ್ಳಲಾಗುವುದು ಎಂದು ರೈತ ಮುಖಂಡ ಬಿ.ಎಂ.ಸತೀಶ್ ಕೊಳೇನಹಳ್ಳಿ ಎಚ್ಚರಿಕೆ ನೀಡಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾಧಿಕಾರಿ ಶಿವಾನಂದ ಕಾಪಶಿ ಜಿಲ್ಲೆಯ ರೈತರ ಪರವಾಗಿ ಮಾತನಾಡದೇ ಕೇವಲ ರಾಜಕಾರಣಿಗಳು, ಸಕ್ಕರೆ ಕಾರ್ಖಾನೆಗಳ ಮಾಲೀಕರ ಪರವಾಗಿ ಮಾತನಾಡುತ್ತಿದ್ದು, ರೈತರ ನೋವು ಅವರಿಗೆ ಕಾಣಿಸುತ್ತಿಲ್ಲ. ಜಿಲ್ಲಾಧಿಕಾರಿಗೆ ರೈತರ ಹಿತಾಸಕ್ತಿಗಿಂತ ರಾಜಕಾರಣಿ ಶಾಮನೂರು ಶಿವಶಂಕರಪ್ಪ ನವರ ಹಿತಾಸಕ್ತಿಯೇ ಮುಖ್ಯವಾದಂತಿದೆ ಎಂದು ಆರೋಪಿಸಿದರು.

ಮಾ.13ರ ಮಧ್ಯಾಹ್ನ 3.30ಕ್ಕೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕುಕ್ಕುವಾಡ ಸಕ್ಕರೆ ಕಾರ್ಖಾನೆ ಸುತ್ತಮುತ್ತಲಿನ ಗ್ರಾಮಗಳಾದ [illegible]ನಹಳ್ಳಿ, [illegible]ನಹಳ್ಳಿ, ಬಲ್ಲೂರು, ಶಿರಗಾನಹಳ್ಳಿ, ಬಡಗನಹಳ್ಳಿ, ನಾಗರಸನಹಳ್ಳಿ, ಕುಕ್ಕುವಾಡ, ವಡೇರಹಳ್ಳಿ, ಮುದಹದದಿ, ಬಿಟ್ಟಿಕಟ್ಟೆ, ಹದಡಿ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಮತ್ತು ಕುಕ್ಕುವಾಡ ಸಕ್ಕರೆ ಕಾರ್ಖಾನೆ ಮಾಲೀಕ ಮತ್ತು ವ್ಯವಸ್ಥಾಪಕ ನಿರ್ದೇಶಕರ ಸಭೆ ಕರೆದಿದ್ದು, ರೈತರ ಸಮಸ್ಯೆಗಳ ಬಗ್ಗೆ ಕೂಲಂಕುಶವಾಗಿ ಚರ್ಚಿಸಿ ಸೂಕ್ತ ಪರಿಹಾರ ಮಾರ್ಗಗಳನ್ನು ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಈ ಹಿಂದೆ ನಾವು 2022ರ ಡಿಸೆಂಬರ್‌ನಲ್ಲಿ ಜಿಲ್ಲಾಧಿಕಾರಿಯನ್ನು ಭೇಟಿ ಮಾಡಿ ಕುಕ್ಕುವಾಡ ಸಕ್ಕರೆ ಕಾರ್ಖಾನೆಯಿಂದ ಆಗುವ ಸಮಸ್ಯೆಗಳನ್ನು ಮನವರಿಕೆ ಮಾಡಿಕೊಟ್ಟು, ಸೂಕ್ತ ಪರಿಹಾರ ಒದಗಿಸುವಂತೆ ನೀಡಿದ ಮನವಿಗೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿಗೆ ರೈತರ ಸಮಸ್ಯೆ ಕುರಿತು ಕಾರಣ ಕೇಳಿ ನೋಟಿಸ್ ನೀಡಲಾಗುವುದು ಎಂದು ನೀಡಿದ್ದ ಭರವಸೆ ಹುಸಿಯಾಗಿದೆ.

ರಾಜ್ಯ ಹೆದ್ದಾರಿ ಬಂದ್ ಮಾಡಿ ಜನವರಿ 9 ರಂದು ಪ್ರತಿಭಟನೆ ನಡೆಸುತ್ತಿದ್ದ ಸ್ಥಳಕ್ಕೆ ಆಗಮಿಸಿದ ದಾವಣಗೆರೆ ತಹಶೀಲ್ದಾರರು, ನಮ್ಮ ಮನವಿ ಸ್ವೀಕರಿಸಿ, ಶೀಘ್ರವೇ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದರು.

ಒಂದು ತಿಂಗಳು ಕಳೆದರೂ ಯಾವುದೇ ಕ್ರಮ ಕೈಗೊಳ್ಳದ ಕಾರಣ ಮಾರ್ಚ್ 6ರಂದು ಡಿಸಿ ಕಚೇರಿಗೆ ಮುತ್ತಿಗೆ ಹಾಕಿದ್ದೆವು. ಅಂದು ಕೂಡ ಸ್ಥಳಕ್ಕೆ ಆಗಮಿಸದ ಜಿಲ್ಲಾಧಿಕಾರಿ, ಅಪರ ಜಿಲ್ಲಾಧಿಕಾರಿಯನ್ನು ಕಳುಹಿಸಿ ಸಮಾಧಾನಪಡಿಸಲು ಮುಂದಾಗಿದ್ದರು. ಆದರೆ, ಪ್ರತಿಭಟನಾಕಾರರು ಸುಮ್ಮನಾಗದ ಕಾರಣ ಮಾರ್ಚ್ 13ರಂದು ಸಭೆ ಕರೆಯಲಾಗುವುದೆಂದು ನೀಡಿದ್ದ ಭರವಸೆಯಂತೆ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಸಭೆ ಕರೆದಿದ್ದಾರೆ.

ಆದರೆ, ಸಭೆಯ ನೋಟಿಸನ್ನು ಕಾರ್ಖಾನೆ ಕಚೇರಿ ವ್ಯವಸ್ಥಾಪಕರಿಗೆ ಕಳುಹಿಸಿದ್ದು, ಈ ಮೂಲಕ ಸಮಸ್ಯೆ ಆಲಿಸಿ, ಸಮಾಧಾನ ಮಾಡಿ ಕಳುಹಿಸುವ ಕುತಂತ್ರ ಮಾಡಲಾಗಿದೆ. ಮುಂದೆಯಾದರೂ ಜಿಲ್ಲಾಧಿಕಾರಿ ತಮ್ಮ ಕರ್ತವ್ಯ ಮನನ ಮಾಡಿಕೊಂಡು ಕಾರ್ಖಾನೆ ಮಾಲೀಕರು ಮತ್ತು ವ್ಯವಸ್ಥಾಪಕ ನಿರ್ದೇಶಕರಿಗೆ ನೋಟಿಸ್ ಕಳಿಸಿ ಸಭೆ ನಡೆಸಬೇಕು.

ಸಭೆಗೆ ಕಾರ್ಖಾನೆ ಮಾಲೀಕರು ಮತ್ತು ವ್ಯವಸ್ಥಾಪಕ ನಿರ್ದೇಶಕ ಎಸ್.ಎಸ್. ಗಣೇಶ್‌ರನ್ನು ಕಡ್ಡಾಯವಾಗಿ ಕರೆಸಬೇಕು. ಇಲ್ಲದಿದ್ದರೆ ಸಭೆಯನ್ನು ಬಹಿಷ್ಕರಿಸಿ ಮುಂದಿನ ಹೋರಾಟದ ರೂಪುರೇಷೆಗಳನ್ನು ಹಮ್ಮಿಕೊಳ್ಳಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಬಲ್ಲೂರು ಬಸವರಾಜ್, ಜೆ.ಎಂ.ರುದ್ರೇಗೌಡ ಕುಕ್ಕುವಾಡ, ವೈ.ಬಿ. ಚನ್ನಪ್ಪ, ತಿಪ್ಪೇಸ್ವಾಮಿ. ಎನ್, ನಿಂಗಪ್ಪ.ಎಸ್ ಮತ್ತಿತರರಿದ್ದರು.

ಜನ್ಮ ನೀಡುವ ಶಕ್ತಿಯನ್ನು ಪ್ರಕೃತಿ ಮಹಿಳೆಯರಿಗೆ ನೀಡಿದೆ

ಹರಪನಹಳ್ಳಿ : ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಎಂ. ಪಿ. ಲತಾ ಮಲ್ಲಿಕಾರ್ಜುನ

ಹರಪನಹಳ್ಳಿ, ಮಾ. 9 - ಜನ್ಮ ನೀಡುವ ಶಕ್ತಿಯನ್ನು ಪ್ರಕೃತಿ ಮಹಿಳೆಯರಿಗೆ ನೀಡಿದೆ, ಮಹಿಳೆಯರು ಯಾವುದೇ ಸಂದರ್ಭ ಹಾಗೂ ಪರಿಸ್ಥಿತಿಗಳಿಗೆ ಹೊಂದಿಕೊಳ್ಳುವ ಶಕ್ತಿಯನ್ನು ಹೊಂದಿದ್ದಾರೆ ಎಂದು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಂ.ಪಿ. ಲತಾ ಮಲ್ಲಿಕಾರ್ಜುನ್ ಹೇಳಿದರು.

ಪಟ್ಟಣದ ಹಡಗಲಿ ರಸ್ತೆಯಲ್ಲಿರುವ ಕಾಂಗ್ರೆಸ್ ಭವನದಲ್ಲಿ ಎಂ.ಪಿ.ರವೀಂದ್ರ ಪ್ರತಿಷ್ಠಾನದ ವತಿಯಿಂದ ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹಿಳೆಯರಿಗೆ ಏರ್ಪಡಿಸಿದ್ದ ಸನ್ಮಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಈ ಹಿಂದೆ ಮಹಿಳೆಯರಿಗೆ ಅಭಿವೃದ್ಧಿ ಕಲಿಸಲಾಗುತ್ತಿತ್ತು ಆದರೆ ಈಗ ಮಹಿಳೆಯರಿಂದ ಅಭಿವೃದ್ಧಿ ಹೊಂದುತ್ತಿದೆ. ಮಹಿಳೆಯರು ತಮಗೆ ನೀಡಿರುವ ರಾಜಕೀಯ ಅಧಿಕಾರವನ್ನು ಸಂಪೂರ್ಣವಾಗಿ ಬಳಸಿಕೊಳ್ಳುವ ಸಾಮರ್ಥ್ಯ ಗಳಿಸಿ ಸಮಾಜದಲ್ಲಿ ಸಮಾನತೆ ಸಾಧಿಸಬೇಕು. ಹೆಣ್ಣು ಮನಸ್ಸು ಮಾಡಿದರೆ ಮನೆ ನಂದಗೋಕುಲ ಮಾಡುತ್ತಾಳೆ. ಅದೇ ಹೆಣ್ಣಿನ ಮನಸ್ಸು ನೋಯಿಸಿದರೆ, ಅರಮನೆಯೇ ನೋವಿನ ಗೋಕುಲ. ಆದ್ದರಿಂದ ಹೆಣ್ಣಿನ ಮನಸ್ಸನ್ನು ನೋಯಿಸಬೇಡಿ ಎಂದರು.

ಹೆಣ್ಣು ಭೋಗದ ವಸ್ತುವಲ್ಲ, ಆಡುಗೆಯ ಯಂತ್ರವಲ್ಲ. ಪುರುಷ ಮತ್ತು ಮಹಿಳೆಯರಿಗೆ ಸಮಾನತೆಯಿದ್ದರೆ ಮಾತ್ರ ಪ್ರಪಂಚದ ಉಳಿವು. ಹುಟ್ಟಿನಿಂದ ಸಾವಿನವರೆಗೂ ಇತರರ ಸೇವೆಯಲ್ಲಿಯೇ ಲೀನವಾಗುವ ಹೆಣ್ಣು ಪರಾವಲಂಬಿಯಲ್ಲ ಇತರರಿಗೆ ಆಶ್ರಯ ಹಾಗೂ ಆಸರೆಯ ಬೇರು ಎನ್ನುವುದನ್ನು ಸಾಬೀತು ಮಾಡಿದರೂ ಸಮಾನತೆಗಾಗಿ ಮಹಿಳೆ ಇನ್ನೂ ಹೋರಾಟ ಮಾಡುವಂತಿರುವುದು ವಿಷಾದದ ಸಂಗತಿ ಪುರುಷ ಮತ್ತು ಮಹಿಳೆ ಸಮಾನವಾಗಿ ಎರಡು ಎತ್ತಿನ ಬಂಡಿಯಂತೆ ಸಾಗಬೇಕಿದೆ. ಇಂದು ಅನೇಕ ರಂಗದಲ್ಲಿ ಮಹಿಳೆ ಸಾಧನೆ ಮಾಡಿದ್ದಾರೆ ಅವರು ಮಹಿಳೆಯರಿಗೆ ಮಾದರಿಯಾಗಿದ್ದಾರೆ. ಮಹಿಳೆಯರು ತಮ್ಮನ್ನು ತಾವು ರಕ್ಷಣೆ ಮಾಡಿಕೊಳ್ಳಲು ಹೋರಾಟದ ಮೂಲಕ ಮುಂದೆ ಬರಬೇಕು ಎಂದರು.

ದಾವಣಗೆರೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಸುಮತಿ ಜಯಪ್ಪ ಮಾತನಾಡಿ, ಹೆಣ್ಣು ಕುಟುಂಬ ಮತ್ತು ದೇಶದ ಬೆಳಕು. ಅವರೊಂದು ವಚನ ಮತ್ತು ಸಾಮಾಜಿಕ ಕ್ರಾಂತಿಯ ಹರಿಕಾರರು. ಪುರುಷ ಮತ್ತು ಮಹಿಳೆಯರಿಗೆ ಸಮಾನತೆಯಿದ್ದರೆ ಮಾತ್ರ ಪ್ರಪಂಚದ ಉಳಿವು. ಸರ್ಕಾರದ ಯೋಜನೆಗಳನ್ನು ಮಹಿಳೆಯರ ಹೆಸರಿನಲ್ಲಿ ನೀಡಲಾಗುತ್ತದೆ. ಇದಕ್ಕೆ ಮುಖ್ಯ ಕಾರಣ ಮಹಿಳೆಯರು ಇದನ್ನು ಸರಿಯಾದ ರೀತಿಯಲ್ಲಿ ಸದುಪಯೋಗ ಪಡಿಸಿಕೊಳ್ಳುತ್ತಾರೆ ಎಂಬುದಾಗಿದೆ. ಮಹಿಳಾ ದಿನಾಚರಣೆ ರಾಜಕೀಯ, ಸಾಮಾಜಿಕ ಹಾಗೂ ಆರ್ಥಿಕ ಕ್ಷೇತ್ರದಲ್ಲಿನ ಮಹಿಳೆಯರ ಸಾಧನೆಯನ್ನು ಸಂಭ್ರಮಿಸುವ ದಿನವಾಗಿದೆ ಎಂದರು.

ಟಿ.ಎ.ಪಿ.ಸಿ.ಎಂ.ಎಸ್ ಮಾಜಿ ಅಧ್ಯಕ್ಷ ಪುಷ್ಪ ದಿವಾಕರ್, ತಾಲ್ಲೂಕು ಬ್ಲಾಕ್ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಕಂಚಿಕೇರಿ ಜಯಲಕ್ಷ್ಮಿ, ಚಿಗಟೇರಿ ಬ್ಲಾಕ್ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಭಾಗ್ಯಮ್ಮ, ಲೇಪಿಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯರಾದ ಲಕ್ಷ್ಮಿ ಚಂದ್ರಶೇಖರ್, ಹಲುವಾಗಲು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷೆ ರತ್ನಮ್ಮ ಸೋಮಣ್ಣ ಎಸ್.ಟಿ., ಪುರಸಭಾ ಮಾಜಿ ಸದಸ್ಯೆ ಕವಿತಾ ಸುರೇಶ, ಉಮಾ ಶಂಕರ್, ಹಲವಾಗಲು ವನಜಾಕ್ಷಮ್ಮ, ಯುವ ಕಾಂಗ್ರೆಸ್ ಅಧ್ಯಕ್ಷ ಮತ್ತೂರು ಬಸವರಾಜ್, ಚಿಗಟೇರಿ ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷ ಹರಿಯಮ್ಮನಹಳ್ಳಿ ಶಿವರಾಜ, ಎಲ್. ಮಂಜಾನಾಯ್ಕ, ಉದಯಶಂಕರ್, ಮೈದೂರು ಓ. ರಾಮಪ್ಪ ಸೇರಿದಂತೆ ಇತರರು ಇದ್ದರು.

ಜಿಲ್ಲಾಸ್ಪತ್ರೆ ಗುತ್ತಿಗೆ ದಿನಗೂಲಿ ನೌಕರರಿಂದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಧರಣಿ

ದಾವಣಗೆರೆ, ಮಾ.9- ಚಿಗಟೇರಿ ಜಿಲ್ಲಾ ಸರ್ಕಾರಿ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ದಿನಗೂಲಿ ನೌಕರರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ನಿರಂತರ ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ಡಾ.ಬಿ.ಆರ್ ಅಂಬೇಡ್ಕರ್ ರಾಜ್ಯ ಸರ್ಕಾರಿ ಆಸ್ಪತ್ರೆಗಳ ಗುತ್ತಿಗೆ ನೌಕರರ ಹಾಗೂ ಇತರೆ ದಿನಗೂಲಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷ ಡಿ.ಹನುಮಂತಪ್ಪ ಹೇಳಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಮಾರು 20 ವರ್ಷಗಳಿಂದ ಹೊರಗುತ್ತಿಗೆ ಕಾರ್ಮಿಕರಾಗಿ ಆಸ್ಪತ್ರೆ ಶುಚಿಗೊಳಿಸುವುದು, ರೋಗಿಗಳ ಬಹಿರ್ದೆಸೆ ಸ್ವಚ್ಛಗೊಳಿಸುವುದು, ಸ್ನಾನದ ಕೋಣೆ ಮತ್ತು ಶೌಚಾಲಯ ಸ್ವಚ್ಛಗೊಳಿಸುವುದು ಸೇರಿದಂತೆ ಕೋವಿಡ್ 19 ಸಮಯದಲ್ಲಿ ಹಲವಾರು ಗುತ್ತಿಗೆ ನೌಕರರು ವೈಯಕ್ತಿಕವಾಗಿ ಅನಾರೋಗ್ಯಕ್ಕೆ ತುತ್ತಾದರೂ ಜೀವದ ಹಂಗು ತೊರೆದು ಸೇವೆ ಸಲ್ಲಿಸಿದ್ದೇವೆ,

ಕೋವಿಡ್ ವೇಳೆ ಸರ್ಕಾರದ ಸೂಚನೆಯಂತೆ ಮನೆಗೆ ತೆರಳದೆ ಹಿಂದುಳಿದ ವರ್ಗಗಳ ಹಾಸ್ಟೆಲ್‌ನಿಂದ ನೀಡಿದ ಊಟ ಸೇವಿಸಿ ಕಾರ್ಯ ನಿರ್ವಹಿಸಿದ ಗುತ್ತಿಗೆ ನೌಕರರಿಗೆ, ಖಾಯಂ ನೌಕರರಂತೆ ರಿಸ್ಕ್ ಭತ್ಯೆ ಮಂಜೂರು ಮಾಡಲಾಗುವುದು ಎಂದು ಆರೋಗ್ಯ ಸಚಿವರು ನೀಡಿದ ಭರವಸೆ ಈಡೇರಿಲ್ಲ ಎಂದು ದೂರಿದರು.

ಕೂಡಲೇ ನೀಡಿದ ಭರವಸೆ ಯಂತೆ ರಿಸ್ಕ್ ಆಲೋವೆನ್ಸ್ ಮಂಜೂರು ಮಾಡಬೇಕು ಹಾಗೂ ಏಜೆನ್ಸಿ ಬದಲು ನೇರ ಪಾವತಿಗೆ ಒಳಪಡಿಸಬೇಕು. ಅನೇಕ ವರ್ಷಗಳಿಂದ ಕೆಲಸ ಮಾಡಿದ ನೌಕರರನ್ನು ಖಾಯಂಗೊಳಿಸಬೇಕು ಎಂದು ಒತ್ತಾಯಿಸಿ ಧರಣಿ ನಡೆಸಲಾಗುವುದು ಎಂದ ಅವರು, ಖುದ್ದಾಗಿ ಆರೋಗ್ಯ ಸಚಿವರೇ ಬಂದು ನಮ್ಮ ಬೇಡಿಕೆ ಆಲಿಸಿ, ಈಡೇರಿಸಲು ಕ್ರಮ ಕೈಗೊಳ್ಳುವವರೆಗೂ ಧರಣಿ ಹಿಂತೆಗೆದುಕೊಳ್ಳುವುದಿಲ್ಲ ಎಂದರು.

ಸುದ್ದಿಗೋಷ್ಠಿಯಲ್ಲಿ ಸಂಘಟನೆಯ ಜಿ.ಹೆಚ್ ಮಾಲತೇಶ್, ಕೆ.ಬಸವರಾಜ್, ಸುರೇಂದ್ರ, ಕರಿಬಸಪ್ಪ, ತಿಪ್ಪೇಸ್ವಾಮಿ, ವಿನೋದಬಾಯಿ ಮತ್ತಿತರರಿದ್ದರು.

22ರಂದು ಯುಗಾದಿ ಹಬ್ಬದ ಪ್ರಯುಕ್ತ ರಂಗೋಲಿ ಸ್ಪರ್ಧೆ

ದಾವಣಗೆರೆ, ಮಾ.9- ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯು ಪ್ರತಿ ವರ್ಷದಂತೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಚಾಂದ್ರಮಾನ ಯುಗಾದಿ ಹಬ್ಬದ ಅಂಗವಾಗಿ ವಿವಿಧ ಬಡಾವಣೆಗಳಲ್ಲಿ ಸಾರ್ವಜನಿಕರಿಗೆ ಅವರವರ ಮನೆಯಂಗಳದಲ್ಲಿ ಉಚಿತ ರಂಗೋಲಿ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ ಎಂದು ಕಲಾಕುಂಚದ ಸಂಸ್ಥಾಪಕ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

ಮಾ.22 ರ ಬುಧವಾರದಂದು ಬೆಳಗ್ಗೆ 8 ರಿಂದ 12 ರ ವರೆಗೆ ನಡೆಯುವ ರಂಗೋಲಿ ಸ್ಪರ್ಧೆಯಲ್ಲಿ ಭಾಗವಹಿಸ ಬಯಸುವ ಆಸಕ್ತರು ಮಾರ್ಚ್ 15 ರೊಳಗೆ ಹೆಸರು ನೋಂದಾಯಿಸಿಕೊಳ್ಳಬಹುದು. ಮಾಹಿತಿಗಾಗಿ 9538732777 ಗೆ ಸಂಪರ್ಕಿಸಬಹುದು ಎಂದು ಕಲಾಕುಂಚ ಮಹಿಳಾ ವಿಭಾಗದ ಗೌರವ ಅಧ್ಯಕ್ಷೆ ವಸಂತಿ ಮಂಜುನಾಥ್ ತಿಳಿಸಿದ್ದಾರೆ.

12 ರಂದು ರಾಜ್ಯ ಬಾಡಿ ಲಿಫ್ಟಿಂಗ್ ಚಾಂಪಿಯನ್ ಶಿಪ್

ದಾವಣಗೆರೆ, ಮಾ. 9- ಕರ್ನಾಟಕ ರಾಜ್ಯ ಬಾಡಿ ಲಿಫ್ಟಿಂಗ್ ಅಸೋಸಿಯೇಷನ್ ಹಾಗೂ ಶ್ರೀ [illegible]ಶ್ವರ ವ್ಯಾಯಾಮ ಶಾಲೆ ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಇದೇ ಮಾರ್ಚ್ 12 ರಂದು ಬೆಳಗ್ಗೆ 10.30 ಕ್ಕೆ ನಗರದ ಶ್ರೀ ಬೀರೇಶ್ವರ ವ್ಯಾಯಾಮ ಶಾಲಾ ಆವರಣದಲ್ಲಿ ಕರ್ನಾಟಕ ರಾಜ್ಯ ಮಟ್ಟದ ಬಾಡಿ ಲಿಫ್ಟಿಂಗ್ ಚಾಂಪಿಯನ್ ಶಿಪ್ ಹಮ್ಮಿಕೊಳ್ಳಲಾಗಿದೆ.

ನಗರಸಭೆ ಮಾಜಿ ಅಧ್ಯಕ್ಷ ಬಿ. ವೀರಣ್ಣ ಕಾರ್ಯಕ್ರಮ ಉದ್ಘಾಟಿಸುವರು. ಬಾಡಿ ಲಿಫ್ಟಿಂಗ್ ಅಸೋಸಿಯೇಷನ್ ಅಧ್ಯಕ್ಷ ಕೆ. ಧರ್ಮರಾಜ್ ಅಧ್ಯಕ್ಷತೆ ವಹಿಸುವರು. ಮಹಾನಗರ ಪಾಲಿಕೆ ಸದಸ್ಯ ಜೆ.ಎನ್. ಶ್ರೀನಿವಾಸ್ ಆಗಮಿಸಲಿದ್ದಾರೆ ಎಂದು ಸಂಸ್ಥೆ ಕಾರ್ಯದರ್ಶಿ ಸೋಮ. ಗುರುಸ್ವಾಮಿ ತಿಳಿಸಿದ್ದಾರೆ.

ಅಂದು ಬೆಳಗ್ಗೆ 8 ರಿಂದ 10 ಗಂಟೆಯವರೆಗೆ ದೇಹದ ತೂಕ ತೆಗೆದುಕೊಳ್ಳಲಾಗುವುದು. ನಂತರ ಬಂದ ಕ್ರೀಡಾಪಟುಗಳಿಗೆ ಅವಕಾಶವಿರುವುದಿಲ್ಲ ಎಂದು ತಿಳಿಸಿದ್ದಾರೆ.

ಜಿಂಕೆಯ ಕೊಂಬು ಮಾರಾಟ : ವಶ

ದಾವಣಗೆರೆ: [illegible] ಜಿಂಕೆ ಕೊಂಬನ್ನು ಮಾರಾಟ ಮಾಡಲು [illegible] ವ್ಯಕ್ತಿಯನ್ನು ಬಂಧಿಸಿರುವ [illegible] ಪೊಲೀಸರು, ಜಿಂಕೆ ಕೊಂಬು ವಶ ಪಡಿಸಿಕೊಂಡಿದ್ದಾರೆ.

[illegible] ಮಂಜುನಾಥ್, [illegible] ಜಿಂಕೆ ಕೊಂಬು [illegible] ಪೊಲೀಸರು ಬಂಧಿಸಿದ್ದು, [illegible] ಎಂ.ಪಿ. [illegible] ಪಿ.ಎಸ್. [illegible], [illegible], ರಾಘವೇಂದ್ರ, [illegible] ಭಾಗವಹಿಸಿದ್ದರು.

10 ರೂ. ನಾಣ್ಯಗಳ ಚಲಾವಣೆಗೆ ಸಮಸ್ಯೆಯಿಲ್ಲ

ಕರೆನ್ಸಿ ಸಪ್ತಾಹದಲ್ಲಿ ರಿಸರ್ವ್ ಬ್ಯಾಂಕ್ ಪ್ರಬಂಧಕ ಮೋನಿ ರಾಜ ಬ್ರಹ್ಮ

March
Week 2023

ದಾವಣಗೆರೆ, ಮಾ.9- [illegible] ರೂಪಾಯಿ ನಾಣ್ಯ ಸೇರಿದಂತೆ ಯಾವುದೇ ನಾಣ್ಯಗಳ ಚಲಾವಣೆಗೆ ಯಾವುದೇ ಸಮಸ್ಯೆಯಿಲ್ಲ. ಸಾರ್ವಜನಿಕರು ನಿರ್ಭೀತರಾಗಿ ನಾಣ್ಯಗಳ ಚಲಾವಣೆ ಮಾಡಬಹುದೆಂದು ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ಪ್ರಬಂಧಕ ಮೋನಿ ರಾಜ ಬ್ರಹ್ಮ ತಿಳಿಸಿದರು.

ಅವರಿಂದು ತೋಳಹುಣಸೆಯ ಕೆನರಾ ಬ್ಯಾಂಕ್ ಸ್ವ-ಉದ್ಯೋಗ ತರಬೇತಿ ಕೇಂದ್ರದಲ್ಲಿ ದಾವಣಗೆರೆ ಲೀಡ್ ಬ್ಯಾಂಕ್ ಕಛೇರಿ ಹಾಗೂ ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ಜಂಟಿಯಾಗಿ ಆಯೋಜಿಸಿದ್ದ "ಕರೆನ್ಸಿ ಸಪ್ತಾಹ" ವನ್ನು ಉದ್ದೇಶಿಸಿ ಮಾತನಾಡುತ್ತಿದ್ದರು.

ಇತ್ತೀಚಿನ ದಿನಗಳಲ್ಲಿ ನಕಲಿ ನಾಣ್ಯಗಳು ಮಾರುಕಟ್ಟೆಯಲ್ಲಿ ಚಲಾವಣೆಯಾಗುತ್ತಿವೆ ಎಂಬ ಸುಳ್ಳು ಸುದ್ದಿಯಿಂದಾಗಿ ವ್ಯಾಪಾರಸ್ಥರು ಹಾಗೂ ಸಾರ್ವಜನಿಕರು ನಾಣ್ಯಗಳ ಚಲಾವಣೆಗೆ ಹಿಂದೇಟು ಹಾಕುತ್ತಿರುವುದು ನಮ್ಮ ಗಮನಕ್ಕೆ ಬಂದಿದೆ. ಆದರೆ ಜನರು ಯಾವುದೇ ಗೊಂದಲವಿಲ್ಲದೇ ಎಲ್ಲಾ ರೀತಿಯ ನಾಣ್ಯಗಳನ್ನು ಚಲಾವಣೆ ಮಾಡಬಹುದೆಂದು ಅವರು ತಿಳಿಸಿದರು.

ಹಾಗೆಯೇ ಹರಿದ ಹಾಗೂ ಚಲಾವಣೆಗೆ ಯೋಗ್ಯವಲ್ಲದ ಹಳೆಯ ನೋಟುಗಳನ್ನು ಸಾರ್ವಜನಿಕರು ಯಾವುದೇ ಬ್ಯಾಂಕ್‌ನಲ್ಲಿ ಬದಲಾವಣೆ ಅಥವಾ ತಮ್ಮ ಖಾತೆಗೆ ಜಮಾ ಮಾಡಬಹುದಾಗಿದೆ. ಯಾವುದೇ ಬ್ಯಾಂಕ್‌ನ ಸಿಬ್ಬಂದಿ ನಿರಾಕರಿಸುವಂತಿಲ್ಲ ಎಂದು ಮೋನಿ ರಾಜ ಬ್ರಹ್ಮ ತಿಳಿಸಿದರು.

ಲೀಡ್ ಬ್ಯಾಂಕ್ ವಿಭಾಗೀಯ ವ್ಯವಸ್ಥಾಪಕಿ ಹೆಚ್.ಎಂ.ಶಿಲಾ ಅವರು ಮಾತನಾಡಿ, ನೋಟುಗಳು ಹಾಗೂ ನಾಣ್ಯಗಳ ವ್ಯವಹಾರದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ

ಮಾರ್ಚ್ 06 ರಿಂದ ಮಾರ್ಚ್ 10 ರವರೆಗೆ ದೇಶದಾದ್ಯಂತ ಆಯೋಜಿಸಲಾಗುತ್ತಿದೆ. ನಾಣ್ಯಗಳನ್ನು ಸ್ವೀಕರಿಸಲು ವ್ಯಾಪಾರಸ್ಥರು, ಸಾರ್ವಜನಿಕರು ಸೇರಿದಂತೆ ಯಾರೂ ಸಹ ನಿರಾಕರಿಸುವುದು ಅಪರಾಧವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಲೀಡ್ ಬ್ಯಾಂಕ್ ಸಿಬ್ಬಂದಿಗಳಾದ ಸುಧೀರ್ ರೆಡ್ಡಿ, ಪಿ.ಮೂರ್ತಿ ನಾಯ್ಕ್, ಕೆ.ರಾಘವೇಂದ್ರ ನಾಯರಿ, ಕೆನರಾ ಬ್ಯಾಂಕ್ ಸ್ವ-ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕ ಗಣೇಶ್ ರಾವ್, ಸಾರ್ವಜನಿಕರು,

ಇಂದು ವೃತ್ತಿ ರಂಗಭೂಮಿ ಕಲಾವಿದರ ಸಂಘದ ವಾರ್ಷಿಕೋತ್ಸವ

ರಾಜ್ಯ ವೃತ್ತಿ ರಂಗಭೂಮಿ ಕಲಾವಿದರ ಸಂಘದ 27 ನೇ ವಾರ್ಷಿಕೋತ್ಸವದ ಉದ್ಘಾಟನಾ ಸಮಾರಂಭವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಇಂದು ಶಿವಯೋಗಾಶ್ರಮದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿರಕ್ತಮಠದ ಶ್ರೀ ಬಸವಪ್ರಭು ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ ಉದ್ಘಾಟಿಸಲಿದ್ದು, ರಾಜ್ಯ ವೃತ್ತಿ ರಂಗಭೂಮಿ ಕಲಾವಿದರ ಸಂಘದ ಅಧ್ಯಕ್ಷ ಎ.ಭದ್ರಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮಾಜಿ ಮೇಯರ್ ಬಿ.ಜೆ.ಅಜಯ್ ಕುಮಾರ್, ಹಿರಿಯ ಕಲಾವಿದ ಬಸವರಾಜ್ ಐರಣಿ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಶ್ರೀನಿವಾಸ ದಾಸಕರಿಯಪ್ಪ, ದೂಡಾ ಸದಸ್ಯ ಆರ್. ಲಕ್ಷ್ಮಣ ಪಾಲ್ಗೊಳ್ಳಲಿದ್ದು, ಕಾರ್ಯಕ್ರಮದಲ್ಲಿ ಸಂಜೆ 6ಕ್ಕೆ 'ಧರ್ಮದೇವತೆ' ಮತ್ತು ರಾತ್ರಿ 8 ಕ್ಕೆ 'ಕಳ್ಳ ಗುರು ಸುಳ್ಳ ಶಿಷ್ಯ' ಸಾಮಾಜಿಕ ನಾಟಕ ಪ್ರದರ್ಶನಗೊಳ್ಳಲಿದೆ.

ಪ್ರಕಟಣೆ

ದಾವಣಗೆರೆ ಶುಗರ್ ಕಂಪನಿ ಲಿ.,
ಕುಕ್ಕುವಾಡ-577 525, ದಾವಣಗೆರೆ ತಾಲ್ಲೂಕು, ಜಿಲ್ಲೆ.

ಶೇರುದಾರರ ಗಮನಕ್ಕೆ

ನಮ್ಮ ಕಂಪನಿಯ ಸಮಸ್ತ ಎಲ್ಲಾ ಭೌತಿಕ ಶೇರುದಾರರಿಗೆ, [illegible] ಶೇರುದಾರರು ದಿ. 03.11.2021ರ SEBI [illegible] ಶೇರುಗಳನ್ನು Demat [illegible] ದಿ. 31.03.2023ರ ಒಳಗೆ ಮಾಡಬೇಕಾಗಿದೆ. [illegible] ಕಂಪನಿಯ ಶೇರು ವಿಭಾಗದ [illegible]

ನಿಧಿ ವಾಸ್ವಾನಿ, ಕಂಪನಿ ಕಾರ್ಯದರ್ಶಿ